**ದಿನಾಂಕ: 04.12.2021 ರಂದು 11-30 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

### : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕೆ ಅಧಿಕಾರಿ (Horti. Inspector) |
| **ಸದಸ್ಯರುಗಳು** | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |
| **ಸದಸ್ಯರುಗಳು** | ಟ್ರಾಫಿಕ್ ಇಲಾಖೆಯ ಅಧಿಕಾರಿಗಳು |

### :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 18ನೇ ಮುಖ್ಯರಸ್ತೆಯ ಉದ್ಯಾನವನ, ಹಾಪ್‌ಕಾಮ್ಸ್ ಹಾಗೂ ಜೆ.ಪಿ.ನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬೀದಿ ದೀಪಗಳನ್ನು ನಿರ್ವಹಣೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳು ಸೂಚಿಸುವಂತೆ ಚರ್ಚಿಸಲಾಯಿತು.
- 9ನೇ ಅಡ್ಡರಸ್ತೆಯ ವಿಎಲ್‌ಸಿಸಿ ಎದುರು ಗಾರ್‌ಬೇಜ್‌ಗಳನ್ನು ಹಾಕುತ್ತಿರುವುದಾಗಿ ಅದನ್ನು ತೆರವುಗೊಳಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸುವಂತೆ ಕೋರಲಾಯಿತು.
- ಜೆ.ಪಿ.ನಗರ ಸುತ್ತಮುತ್ತಲಿನ ಕೆಲವು ರಸ್ತೆಗಳು ಗುಂಡಿ ಬಿದ್ದಿರುವುದಾಗಿ, ಗುಂಡಿ ಬಿದ್ದಿರುವ ರಸ್ತೆಗಳನ್ನು ಮುಚ್ಚುವಂತೆ ಇಂಜಿನಿಯರ್‌ಗಳಿಗೆ ಕೋರಲಾಯಿತು.
- ತಿರುಮಲ ದೇವಸ್ಥಾನದ ಹತ್ತಿರ ಹಾಗೂ 16ನೇ ಮುಖ್ಯರಸ್ತೆಯಲ್ಲಿ Pedestrian cross marking ಹಾಕುವಂತೆ ಕೋರಲಾಯಿತು.

***ಪು.ತಿ.ನೋ***

- 24ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ ಪಾದಚಾರಿ ಮಾರ್ಗವನ್ನು ದುರಸ್ಥಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- 18ನೇ ಎ ಮುಖ್ಯರಸ್ತೆಯ ಟೆಲಿಫೋನ್ ಜಂಕ್ಷನ್ ಬಾಕ್ಸ್ ಹತ್ತಿರ ಗಾರ್ಬೇಜ್ ಶೇಖರಣೆಯಾಗುತ್ತಿರುವುದಾಗಿ ದೂರಿರುವ ಬಗ್ಗೆ.
- !6ನೇ ಬಿ ಮುಖ್ಯರಸ್ತೆಯಲ್ಲಿ ಮರದ ರೆಂಬೆ-ಕೊಂಬೆಗಳನ್ನು ಕತ್ತರಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಜೆ.ಪಿ.ನಗರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಕಾಟವಿರುವುದಾಗಿ ದೂರಿರುವ ಬಗ್ಗೆ.

- ಮೇಲ್ಕಂಡ ಎಲ್ಲಾ ದೂರುಗಳ ಬಗ್ಗೆ ಚರ್ಚಿಸಲಾಗಿ, ಆಯಾ ದೂರುಗಳ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಗಿ, ಮುಂದಿನ ವಾರ್ಡ್ ಸಮಿತಿ ಸಭೆಯಲ್ಲಿ ದೂರುಗಳ ಬಗ್ಗೆ ಕ್ರಮ ಕೈಗೊಂಡ ಅನುಪಾಲನಾ ವರದಿಯನ್ನು ನೀಡಲು ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Nagaraj. 4.
**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 177**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**